# ಸಿವಿಲ್ ಮತ್ತು ಜೆ.ಎಮ್.ಎಫ್.ಸಿ ನ್ಯಾಯಾಧೀಶರ ನ್ಯಾಯಾಲಯ, ಶಾಹಾಪೂರ
## ಸಿ.ಸಿ ನಂಃ 721/2018

| | | |
|---|---|---|
| ಸಾಕ್ಷಿಯ ಹೆಸರುಃ | ಶರಣಪ್ಪ | **ಪ್ರಾಸಾಃ 04** |
| ತಂದೆ/ಗಂಡನ ಹೆಸರುಃ | ಸೂಜಿರಪ್ಪ | **ಚಾಸಾಃ 04** |
| ವಯಸ್ಸುಃ | 35 ವರ್ಷ | **ದಿಃ 26.10.2024.** |
| ಉದ್ಯೋಗಃ | ಒಕ್ಕಲುತನ | ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು. |
| ವಾಸ ಸ್ಥಳಃ | ಕೋಮನೂರು | |

**ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ ಃ**

ನನಗೆ ಚಾಸಾಃ1 ಮತ್ತು ಆರೋಪಿತರು ಪರಿಚಯ ಇರುವುದಿಲ್ಲ. ಘಟನೆ ಬಗ್ಗೆ ನನಗೆ ಏನು ಗೊತ್ತಿರುವುದಿಲ್ಲ. ಘಟನೆಯ ಬಗ್ಗೆ ನಾನು ಪೋಲಿಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**(ಈ ಸಾಕ್ಷಿಯು ಈ ಹಿಂದೆ ತನಿಖಾಧಿಕಾರಿಯವರ ಮುಂದೆ ನೀಡಿದ ಹೇಳಿಕೆಗೆ ವಿರೋದಾತ್ಮಕವಾಗಿ ಸಾಕ್ಷ್ಯ ನುಡಿದಿರುವುದರಿಂದ ಪ್ರತಿಕೂಲ ಪಕ್ಷಕಾರರು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾದ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅನುಮತಿ ನೀಡಬೇಕೆಂದು ಸಹಾಯಕ ಸರಕಾರಿ ಅಭಿಯೋಜಕರು ಭಿನವಿಸಿರುತ್ತಾರೆ. ಈ ಪ್ರಕರಣದ ಕಾಗದ ಪತ್ರಗಳನ್ನು ಪರಿಶೀಲಿಸಿದಾಗ ಸಾಕ್ಷಿಯು ತನ್ನ ಹಿಂದಿನ ಹೇಳಿಕೆಗೆ ವಿರೋಧಾತ್ಮಕವಾಗಿ ಸಾಕ್ಷ್ಯ ನುಡಿದಿರುವುದು ಕಂಡು ಬರುತ್ತದೆ. ಆದ್ದರಿಂದ ಪ್ರತಿಕೂಲ ಪಕ್ಷಕಾರನು ತನ್ನ ಪಾಟೀ ಸವಾಲಿನಲ್ಲಿ ಕೇಳಬಹುದಾಗ ಪ್ರಶ್ನೆಗಳನ್ನು ಈ ಸಾಕ್ಷಿಗೆ ಕೇಳಲು ಅಭಿಯೋಜನೆಗೆ ಅನುಮತಿ ನೀಡುವುದು ಸೂಕ್ತ ಮತ್ತು ನ್ಯಾಯೋಚಿತ ಎಂದು ಮನಗೊಂಡು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು ಃ ಮಾನ್ಯ ಸ.ಸ.ಅ. ರವರಿಂದಃ**

ದಿಃ 31.08.2017 ರಂದು ಆರೋಪಿತರು ಚಾಸಾ.1 ಮತ್ತು 6 ರವರೊಂದಿಗೆ ಜಗಳ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. 3 ನೇ ಆರೋಪಿಯು ಚಾಸಾ.1 ರವರಿಗೆ ಅವಾಚ್ಯ ಶಬ್ದಗಳಿಂದ ಬೈದು ಕಟ್ಟಿಗೆಯಿಂದ ಹೊಡೆಯಲು ಬಂದಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ಎಲ್ಲರೂ ಸೇರಿಕೊಂಡು ಚಾಸಾ.1 ರವರಿಗೆ ಜೀವ ಬೆದರಿಕೆ ಹಾಕಿರುತ್ತಾನೆ ಎಂದರೆ ಸರಿಯಲ್ಲ. ಸಾಕ್ಷಿಗೆ ಹೇಳಿಕೆಯನ್ನು ತೋರಿಸಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿರುತ್ತಾರೆ. ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಆರೋಪಿತರಿಗೆ ಸಹಾಯ ಮಾಡಲು ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಆರೋಪಿತರ ಪರಃ ಶ್ರೀ ಎಸ್.ಎಸ್. ವಕೀಲರವರಿಂದಃ</u>**

ಯಾವುದೇ ಪಾಟೀ ಸವಾಲು ಇರುವುದಿಲ್ಲ.

**ಮರುವಿಚಾರಣೆ : ಇರುವುದಿಲ್ಲ.**

( ಸಾಕ್ಷಿ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು. )

**ಓ. ಹೇ. ಕೇ. ಸರಿ ಇದೆ.**

**ಹೆಚ್ಚುವರಿ ಜೆಎಂಎಫ್‌ಸಿ ನ್ಯಾಯಾಧೀಶರು**
**ಶಾಹಾಪೂರ**

Accused No.1 to 4 are present.

CW-1 present and examined as PW-1. Ex.P-1 document marked.

Issue witness summons to CW-6 to 11 Returnable by 20.11.2024.

Addl. C.J. & JMFC, Shahapur.